## ಎಂವಿಸಿ ಸಂಖ್ಯೆಃ 656/2022 ಆರ್.ಡಬ್ಲೂಃ1

## ದಿನಾಂಕಃ 26-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.

## ಮುಖ್ಯ ವಿಚಾರಣೆಃ ಎದುರುದಾರರ ಪರ ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿದಾರರು ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

1. 4 ವೇತನ ಪ್ರಮಾಣ ಪತ್ರಗಳನ್ನು ಒಟ್ಟಾಗಿ ನಿಆರ್-1 ಎಂದು ಗುರುತಿಸಲಾಯಿತು.
2. ರಜೆ ಮಂಜೂರಾದ ಕುರಿತು ಸಲ್ಲಿಸಿದ ದಾಖಲೆ ಮತ್ತು ಆದೇಶ ಪ್ರತಿಯನ್ನು ಒಟ್ಟಾಗಿ ನಿಆರ್-2 ಎಂದು ಗುರುತಿಸಲಾಯಿತು.

## ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದ

ನಾನು ಬಿಎ ಪದವೀಧರನಾಗಿರುತ್ತೇನೆ. ಅಪಘಾತವಾದ ದಿನ ನಾನು ಪ್ರಯಾಣ ಮಾಡುತ್ತಿರಲಿಲ್ಲ. ನಾನು ಕಂಟ್ರೋಲರ್ ಆಗಿರುತ್ತೇನೆ ಎಂದು ಹೇಳುತ್ತಾರೆ. ಸದ್ರಿ ಅಪಘಾತ ಹೇಗೆ ಆಗಿದೆ ಎಂದು ನನಗೆ ಖುದ್ದಾಗಿ ಗೊತ್ತಿಲ್ಲ. ಅದಲ್ಲದೇ ಯಾರ ತಪ್ಪಿನಿಂದ ಸದ್ರಿ ಅಪಘಾತ ಆಗಿದೆ ಎಂದು ನನಗೆ ಗೊತ್ತಿಲ್ಲ. ಪ್ರಮಾಣ ಪತ್ರ ತಯಾರಿಸಲು ಮಾಹಿತಿ ನಾನೇ ಕೊಟ್ಟಿರುತ್ತೇನೆ. ಅಪಘಾತ ಹೇಗೆ ಆಯಿತು ಎಂದು ನಾನು ನನ್ನ ಪ್ರಮಾಣ ಪತ್ರದಲ್ಲಿ ನಮೂದಿಸಿದ್ದು ಅದು ನನಗೆ ಹೇಗೆ ಗೊತ್ತಾಯಿತು ಎಂದರೆ ಸದ್ರಿ ಆ ವಾಹನದಲ್ಲಿ ನಮ್ಮ ಇತರ ಸಿಬ್ಬಂದಿಗಳು ಪ್ರಯಾಣ ಮಾಡುತ್ತಿದ್ದರು ಅವರು ಹೇಳಿದ್ದರಿಂದ ಆ ವಿಷಯ ನನಗೆ ಗೊತ್ತಾಗಿದೆ ಎಂದು ಹೇಳುತ್ತಾರೆ.

ಸದ್ರಿ ಆ ದಿನ ಬಸ್‌ನಲ್ಲಿದ್ದ ನಿರ್ವಾಹಕನೇ ಅಪಘಾತ ವಾಹನ ಚಾಲಕನ ತಪ್ಪಿನಿಂದ ಆಗಿದೆ ಎಂದು ದೂರು ಸಲ್ಲಿಸಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದ್ರಿ ಅಪಘಾತ ಚಾಲಕನ ತಪ್ಪಿನಿಂದ ಸಂಭವಿಸಿದ್ದರಿಂದ ಆತನನ್ನು ಸೇವೆಯಿಂದ ವಜಾ ಮಾಡಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಅಪಘಾತ ಯಾವುದೇ ತಾಂತ್ರಿಕ ದೋಷದಿಂದ ಆಗಿಲ್ಲ ಎಂದು ವರದಿ ನೀಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಪ್ರಕರಣದಲ್ಲಿ ನನಗೆ ಯಾವುದೇ ರೀತಿಯ ಮಾಹಿತಿ ಇರದೇ ಇದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿ

ಅಲ್ಲ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

**(ಓ.ಹೇ.ಕೇ.ಸ.)**

**ಪ್ರಭಾರ 3 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ರಾಣೆಬೆನ್ನೂರ.**

ಸಾಕ್ಷಿದಾರರ ಸಹಿಃ